## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಶಮೀವುಲ್ಲಾ, ಹಿಂದಿನ ಕಾರ್ಯದರ್ಶಿ, ಮಠದ ಕುರುಬರಹಟ್ಟಿ ಗ್ರಾಮ ಪಂಚಾಯಿತಿ, ಚಿತ್ರದುರ್ಗ ತಾಲ್ಲೂಕು & ಜಿಲ್ಲೆ ಇವರು ಸರ್ಕಾರಿ ನೌಕರರಾಗಿ ಕರ್ತವ್ಯಲೋಪ ಎಸಗಿರುವ ಬಗ್ಗೆ ಇವರ ವಿರುದ್ಧ ನಡವಳಿಕೆ – ಕುರಿತು.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ.ಕಂಪ್ಲೇಂಟ್/ಉಪಲೋಕ್/ಬಿಡಿ–7960/2015/ಡಿಆರ್‌ಇ–5, ದಿನಾಂಕ:01–10–2016.

**ಪ್ರಸ್ತಾವನೆ:**

ಶ್ರೀ ಬಿ. ಹನುಮಂತಪ್ಪ, ಮಠದ ಕುರುಬರಹಟ್ಟಿ ಗ್ರಾಮ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ ಇವರು ಸಲ್ಲಿಸಿರುವ ದೂರಿನಲ್ಲಿ, ಮಠದ ಕುರುಬರಹಟ್ಟಿ ಗ್ರಾಮದ ಆರ್.ಎಸ್. ನಂ.61ರಲ್ಲಿ ನಿವೇಶನ ಮತ್ತು ವಸತಿ ರಹಿತ ಬಡವರಿಗಾಗಿ ವಿಂಗಡಿಸಲಾದ ನಿವೇಶನಗಳನ್ನು ಕಾನೂನು ಬದ್ಧವಾಗಿ ಫಲಾನುಭವಿಗಳನ್ನು ಆಯ್ಕೆ ಮಾಡದೆ ಅಕ್ರಮವಾಗಿ ನೂರಾರು ನಿವೇಶನಗಳನ್ನು ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ಖಾತೆಗಳನ್ನು ಮಾಡಿ ಅಕ್ರಮ ಎಸಗಿದ್ದಾರೆ. ಹಕ್ಕುಪತ್ರಗಳಲ್ಲಿ ಸಂಬಂಧಿಸಿದ ಅಧಿಕಾರಿಗಳ ಸಹಿ ಇರುವುದಿಲ್ಲ. ಇದರ ಹಿಂದೆ ಸಾಕಷ್ಟು ಭ್ರಷ್ಟಾಚಾರ ನಡೆದಿರುತ್ತದೆ. 4–5 ವರ್ಷಗಳಿಂದ 1000 ಶೌಚಾಲಯಗಳನ್ನು ನಿರ್ಮಿಸಲು ಸರ್ಕಾರ ನಿರ್ದೇಶಿಸಿದ್ದರೂ ಅವುಗಳಲ್ಲಿ ಅರ್ಧದಷ್ಟು 500 ಶೌಚಾಲಯಗಳು ನಿರ್ಮಾಣಗೊಂಡಿದ್ದು, ಉಳಿದವು ನಿರ್ಮಾಣವಾಗದೆ ಹಣ ದುರುಪಯೋಗವಾಗಿರುವ ಸಾಧ್ಯತೆ ಇದ್ದು, ಇವರ ವಿರುದ್ಧ ಕ್ರಮ ತೆಗೆದುಕೊಳ್ಳಲು ವಿನಂತಿಸಿರುತ್ತಾರೆ.

ಸದರಿ ಅರ್ಜಿಯ ಬಗ್ಗೆ ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಚಿತ್ರದುರ್ಗ ರವರು ತನಿಖೆ ನಡೆಸಿ, ವರದಿಯನ್ನು ಲೋಕಾಯುಕ್ತ ಕಛೇರಿ, ಬೆಂಗಳೂರು ಇಲ್ಲಿಗೆ ಸಲ್ಲಿಸಿದ್ದು, ಈ ವರದಿಯಲ್ಲಿ, ರಿ.ಸ.ನಂ.61ರಲ್ಲಿ 306 ನಿವೇಶನಗಳಿಗೆ ಮಾತ್ರ ನಕ್ಷೆಯನ್ನು ತಯಾರಿಸಿರುತ್ತಾರೆ. ಆದರೆ ಸುಮಾರು 400ಕ್ಕೂ ಹೆಚ್ಚು ನಿವೇಶನಗಳಿಗೆ ಖಾತೆ ಮಾಡಿರುವುದು, ಕೆಲವು ಹಕ್ಕುಪತ್ರಗಳಲ್ಲಿ ಗ್ರಾಮ ಪಂಚಾಯಿತಿ ಅಧಿಕಾರಿಗಳ ಸಹಿ ಇಲ್ಲದೇ ಕೇವಲ ಅಧ್ಯಕ್ಷರ ಸಹಿ ಇರುವಂತಹ ಹಕ್ಕುಪತ್ರಗಳು, ನಿವೇಶನ ಪಡೆದ ಫಲಾನುಭವಿಗಳು ಹಂಚಿಕೆಯಾದ ದಿನಾಂಕದಿಂದ 25 ವರ್ಷಗಳ ಅವಧಿಯವರೆಗೆ ನಿವೇಶವನ್ನು ಮಾರಟ ಮಾಡಬಾರದೆಂದು ನಿವೇಶನ ಹಕ್ಕುಪತ್ರದಲ್ಲಿರುವ ಷರತ್ತನ್ನು ಉಲ್ಲಂಘನೆ ಮಾಡಿರುವುದು ಕಂಡುಬಂದಿರುತ್ತದೆಂದು ಮಾನ್ಯ ಉಪಲೋಕಾಯುಕ್ತರು ತಿಳಿಸಿರುತ್ತಾರೆ.

ಆದ್ದರಿಂದ, ಶ್ರೀ ಶಮೀವುಲ್ಲಾ, ಹಿಂದಿನ ಕಾರ್ಯದರ್ಶಿ, ಮಠದ ಕುರುಬರಹಟ್ಟಿ ಗ್ರಾಮ ಪಂಚಾಯಿತಿ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ ಇವರು ತಮ್ಮ ಕರ್ತವ್ಯ ಪಾಲನೆಯಲ್ಲಿ ನಿಷ್ಠೆಯನ್ನು ತೋರದೇ, ದುರ್ವರ್ತನೆ ತೋರಿಸಿ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ, ನಿಯಮ 3(1)ರಲ್ಲಿ ಹೇಳಿದಂತೆ ದುರ್ನಡತೆ/ದುರ್ವರ್ತನೆಯಿಂದ ವರ್ತಿಸಿ ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ಕಂಡುಬಂದದ್ದರಿಂದ, ಇವರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ಅಡಿಯಲ್ಲಿ ಇಲಾಖಾ ವಿಚಾರಣೆ ಮಾಡಲು ತಮಗೆ ವಹಿಸುವಂತೆ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರುರವರ ವರದಿಯನ್ನು ಪರಿಶೀಲಿಸಿ, ಈ ಪ್ರಕರಣದಲ್ಲಿ ಒಳಗೊಂಡಿರುವ ಶ್ರೀ ಶಮೀವುಲ್ಲಾ, ಹಿಂದಿನ ಕಾರ್ಯದರ್ಶಿ, ಮಠದ ಕುರುಬರಹಟ್ಟಿ ಗ್ರಾಮ ಪಂಚಾಯಿತಿ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಉಪಲೋಕಾಯುಕ್ತರಿಗೆ ವಹಿಸಲು ಸರ್ಕಾರ ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 699 ಗ್ರಾಪಂಕಾ 2016 ಬೆಂಗಳೂರು, ದಿನಾಂಕ:22-11-2016.**

ಶ್ರೀ ಶಮೀವುಲ್ಲಾ, ಹಿಂದಿನ ಕಾರ್ಯದರ್ಶಿ, ಮಠದ ಕುರುಬರಹಟ್ಟಿ ಗ್ರಾಮ ಪಂಚಾಯಿತಿ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತ ರವರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಚಿತ್ರದುರ್ಗ, ಚಿತ್ರದುರ್ಗ ಜಿಲ್ಲೆ.
6. ಶ್ರೀ ಶಮೀವುಲ್ಲಾ, ಹಿಂದಿನ ಕಾರ್ಯದರ್ಶಿ, ಮಠದ ಕುರುಬರಹಟ್ಟಿ ಗ್ರಾಮ ಪಂಚಾಯಿತಿ, ಚಿತ್ರದುರ್ಗ ತಾಲ್ಲೂಕು (ಹಾಲಿ ಹಿರೇಹಳ್ಳಿ ಗ್ರಾಮ ಪಂಚಾಯಿತಿ, ಚಳ್ಳಕೆರೆ ತಾಲ್ಲೂಕು) ಚಿತ್ರದುರ್ಗ ಜಿಲ್ಲೆ.
7. ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.